ಆ) ಉದ್ಭವಿಸುವುದಿಲ್ಲ

ಇ) ಅಧ್ಯಕ್ಷರು, ಮಹೇಶ್ ಫೌಂಡೇಶನ್ ಇವರು ಸದರಿ ಸಂಸ್ಥೆಗೆ ನಿವೇಶನ ಹಂಚಿಕೆ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರು ಹಾಗೂ ಪ್ರಾದೇಶಿಕ ಆಯುಕ್ತರಿಗೆ ಮನವಿ ಸಲ್ಲಿಸಿದ್ದು, ಈ ಬಗ್ಗೆ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ದಿನಾಂಕ: 30.07.2014ರ ಪತ್ರದಲ್ಲಿ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಿಗಳ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು 1991 ರನ್ವಯ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಾಗರೀಕ ಸೌಲಭ್ಯದ ನಿವೇಶನಗಳ ಹಂಚಿಕೆಗೆ ಅರ್ಜಿ ಆಹ್ವಾನಿಸಿ, ಸಾರ್ವಜನಿಕ ಪ್ರಕಟಣೆ ಹೊರಡಿಸಿದಾಗ ಅರ್ಜಿ ಸಲ್ಲಿಸುವಂತೆ ಸದರಿ ಸಂಸ್ಥೆಗೆ ತಿಳಿಸಲಾಗಿದೆ.

ಈ) ಸದರಿ ಸಂಸ್ಥೆಯವರು ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಾಗರೀಕ ಸೌಲಭ್ಯದ ನಿವೇಶನ ಹಂಚಿಕೆಗೆ ಅರ್ಜಿಯನ್ನು ಆಹ್ವಾನಿಸಿದಾಗ ಅರ್ಜಿ ಸಲ್ಲಿಸಿದಲ್ಲಿ ಸದರಿ ಸಂಸ್ಥೆಗೆ ನಿವೇಶನ ಹಂಚಿಕೆಗೆ ನಿಯಮಾನುಸಾರ ಕ್ರಮವಹಿಸಲಾಗುವುದು. ನಂತರ ಸ್ಥಳೀಯ ಸಂಸ್ಥೆಯಿಂದ ಸದರಿ ಸಂಸ್ಥೆಗೆ ಮೂಲಭೂತ ಸೌಕರ್ಯ ಒದಗಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕೆರೆಗಳ ಹೂಳೆತ್ತುವುದು

59(166); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

ಅ) ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿರುವ ಸಣ್ಣ ಸಣ್ಣ ಕೆರೆಗಳಲ್ಲಿ ಹೂಳು ತುಂಬಿಕೊಂಡಿರುವುದರಿಂದ ನಗರ ಹಾಗೂ ಪಟ್ಟಣಗಳಿಗೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವ ಬೋರ್‌ವೆಲ್‌ಗಳಿಗೆ ಅಂತರ್ಜಲ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇಂತಹ ಕೆರೆಗಳ ಜೀರ್ಣೋದ್ಧಾರ ಮಾಡುವ ಬಗ್ಗೆ ಸರ್ಕಾರದ ಚಿಂತನೆಯೇನು;

ಇ) ಗದಗ ಜಿಲ್ಲೆಯಲ್ಲಿ 09 ನಗರ/ಪಟ್ಟಣ ಪ್ರದೇಶಗಳಲ್ಲಿರುವ ಚಿಕ್ಕ ಕೆರೆಗಳಲ್ಲಿ ಹೂಳು ತೆಗೆಯುವ ಕಾರ್ಯಕ್ರಮ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ರೋಣ ತಾಲ್ಲೂಕಿನ ರೋಣ, ನರೇಗಲ್ ಮತ್ತು ಗಜೇಂದ್ರಗಡ ವ್ಯಾಪ್ತಿಯಲ್ಲಿನ ಕೆರೆಗಳಲ್ಲಿ ಹೂಳೆತ್ತುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಮಾಹಿತಿ ನೀಡುವುದು)?

ಶ್ರೀ ಖಮರುಲ್ ಇಸ್ಲಾಂ (ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)

ಅ) ಹೌದು

ಆ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) ಗದಗದ ಜಿಲ್ಲೆಯಲ್ಲಿನ ನಗರ/ಪಟ್ಟಣಗಳಲ್ಲಿನ (9) ಎಲ್ಲಾ ಕೆರೆಗಳ ಸರ್ವೆ ಹಾಗೂ ಒತ್ತುವರಿ ತೆರವು ಕೆಲಸ ಪ್ರಗತಿಯಲ್ಲಿದ್ದು, ಚಿಕ್ಕ ಕೆರೆಗಳ ಹೂಳೆತ್ತುವ ಬಗ್ಗೆ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಂದ ಪ್ರಸ್ತಾವನೆ ಸ್ವೀಕರಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು.

ಈ) ಅದೇ ರೀತಿ ರೋಣ ತಾಲ್ಲೂಕಿನ ರೋಣ, ನರೇಗಲ್ ಮತ್ತು ಗಜೇಂದ್ರಗಡ ವ್ಯಾಪ್ತಿಯಲ್ಲಿನ ಕೆರೆಗಳ ಸರ್ವೆ ಹಾಗೂ ಒತ್ತುವರಿ ತೆರವು ಕೆಲಸ ಪ್ರಗತಿಯಲ್ಲಿದ್ದು, ಈ ಕೆರೆಗಳಲ್ಲಿ ಹೂಳೆತ್ತುವ ಕಾರ್ಯಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಸ್ವೀಕರಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು.